# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಕನಕಪುರ

## ಸಿಸಿ ನಂ.958/2019

| | | | |
|---|---|---|---|
| ಚಾಸಾ | **3** | ಪ್ರಾಸಾ | **2** |
| ಹೆಸರು | | ಸತ್ಯಪ್ಪ | |
| ತಂದೆಯ ಹೆಸರು | | ಕೆಂಚಪ್ಪ | |
| ವಯಸ್ಸು | | **55** ವರ್ಷಗಳು | |
| ಉದ್ಯೋಗ | | ವ್ಯವಸಾಯ | |
| ವಿಳಾಸ | | ಹಾರೋಹಳ್ಳಿ ಗ್ರಾಮ | |

ದಿನಾಂಕ**.23.02.2026**ರಂದು ಸಾಕ್ಷಿಗೆ ಪ್ರಮಾಣ ವಚನ ಬೋದಿಸಲಾಯಿತು**.**

**<u>ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-</u>**

ನನಗೆ ಈ ಪ್ರಕರಣದ ಆರೋಪಿತರು ಗೊತ್ತಿಲ್ಲ**.** ಚಾಸಾ**-1,** ಚಾಸಾ**-2,** ಚಾಸಾ**-4** ರಿಂದ ಚಾಸಾ**-8** ರವರು ನನಗೆ ಗೊತ್ತಿಲ್ಲ**.**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಿರುತ್ತಾರೆ**,** ಸಾಕ್ಷಿಯು ಗುರುತಿಸಿದ ದಾಖಲೆಯು ಸ್ಥಳ ಮತ್ತು ಅಮಾನತು ಮಹಜರ್ ಆಗಿದ್ದು**,** ಅದನ್ನು ಈಗಾಗಲೇ ನಿಪಿ**-3** ಎಂದು ಗುರುತಿಸಲಾಗಿದ್ದು**,** ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ**-3(**ಬಿ**)** ಎಂದು ಗುರುತಿಸಲಾಯಿತು**.**

ನಿಪಿ-**3**ಕ್ಕೆ ನಾನು ಯಾವಾಗ ಸಹಿ ಮಾಡಿರುತ್ತೇನೆ ಎನ್ನುವುದು ನನಗೆ ಗೊತ್ತಿಲ್ಲ. ನಿಪಿ-**3** ಕ್ಕೆ ನಾನು ಪೋಲೀಸರ ಕೋರಿಕೆಯ ಮೇರೆಗೆ ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನಿಪಿ-**3**ಕ್ಕೆ ಪೊಲೀಸರು ಯಾವ ವಿಚಾರಕ್ಕೆ ಸಂಬಂಧಿಸಿದಂತೆ ನನ್ನ ಸಹಿ ಪಡೆದಿರುತ್ತಾರೆ ಎನ್ನುವುದು ನನಗೆ ಗೊತ್ತಿಲ್ಲ. ನಿಪಿ-**3**ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಿಪಿ-**3**ಕ್ಕೆ ಆ ದಿನ ನನ್ನೊಂದಿಗೆ ಮತ್ತಾರು ಸಹಿ ಮಾಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಪೊಲೀಸರು ಯಾವುದೇ ಸ್ಥಳ ಪರಿಶೀಲನೆ ಮಾಡಿಲ್ಲ ಮತ್ತು ಯಾವುದೇ ವಾಹನಗಳನ್ನು ಪಂಚನಾಮೆಯ ಮೂಲಕ ಅಮಾನತ್ತು ಪಡಿಸಿಕೊಂಡಿಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ.

ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಸರ್ಕಾರಿ ಅಭಿಯೋಜಕರವರು ಅನುಮತಿ ಕೋರಿದ್ದು, ಅನುಮತಿಯನ್ನು ನೀಡಲಾಯಿತು.

ಪಾಟೀ ಸವಾಲು ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-

ಹಾರೋಹಳ್ಳಿ ಪೊಲೀಸ್ ಠಾಣಾ ಮೊಕದ್ದಮೆ ಸಂಖ್ಯೆ **118/2019**ಕ್ಕೆ ಸಂಬಂಧಿಸಿದಂತೆ ಪೊಲೀಸರು ದಿಃ**09.07.2019** ರಂದು ಬೆಳಿಗ್ಗೆ **9.00** ರಿಂದ **10.30** ಗಂಟೆ ಸಮಯದಲ್ಲಿ ಘಟನಾ ಸ್ದಳಕ್ಕೆ ಬಂದು ಚಾಸಾ-**1** ರವರು ತೋರಿಸಿದ ಸ್ದಳದಲ್ಲಿ ನನ್ನ

ಹಾಗೂ ಚಾಸಾ-2 ರವರ ಸಮಕ್ಷಮ ಸ್ದಳ ಪರಿಶೀಲನೆ ಮಾಡಿ ಅಪಘಾತಪಡಿಸಿದ ವಾಹನವನ್ನು ನಮ್ಮ ಸಮಕ್ಷಮ ಅಮಾನತು ಪಡಿಸಿಕೊಂಡು ಅದಕ್ಕೆ ಸಂಬಂಧಿಸಿದಂತೆ ಒಂದು ಮಹಜರ್ ನ್ನು ತಯಾರಿಸಿ ಅದರ ವಿಚಾರ ನಮಗೆ ಓದಿ ಹೇಳಿ ಸ್ದಳದಲ್ಲಿಯೇ ನಮ್ಮಗಳ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಆರೋಪಿತರು ನನಗೆ ಪರಿಚಯಸ್ಥರು ಎಂದರೆ ಸರಿಯಲ್ಲ. ಆರೋಪಿತರು ನನಗೆ ಪರಿಚಯಸ್ಥರಾದ ಕಾರಣ ನಿಪಿ-3ರಲ್ಲಿರುವ ಸಂಗತಿಗಳು ನನಗೆ ಗೊತ್ತಿದ್ದರೂ ನನಗೆ ಗೊತ್ತಿಲ್ಲ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ-

ಆರೋಪಿ ಪರ ವಕೀಲರು ತಮ್ಮ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆಃ- ಇಲ್ಲ

(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಢೀಕರಿಸುತ್ತೇನೆ.)

**ಓ ಹೇ ಕೇ ಸರಿ ಇದೆ,**

**(ರಾಧ.ಎಸ್)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ, ಕನಕಪುರ.**

**CC No.958/2019**
**CW-3 PW-2**